# ಕರ್ನಾಟಕ ರಾಜ್ಯದ ಆಯವ್ಯಯ

# 2024 – 25

FOR KAS MAINS 2024

NAMMAKPSC ACADEMY

www.nammaKPSC.com

BANGALORE IAS Academy

**Contact**:
**Hebbal**: No 18, 2nd floor, near Hebbal police station, Bellary Main Road, Bangalore.
**Vijayanagar**: N0-211, 5th Main, Hampinagar, Vijayanagar, Bangalore.
**Chandralayout**: 38, 3rd Cross, 60 Feet Main Road, Bengaluru.
Ph: 9632757615/9886151564/080-42103963
www.nammaKPSC.com

**ಸುದ್ದಿಯಲ್ಲಿ ಏಕಿದೆ?** ಕರ್ನಾಟಕ ರಾಜ್ಯದ ಅಭಿವೃದ್ಧಿಯ ಮುನ್ನೋಟ ನೀಡುವ 2024–25ನೇ ಸಾಲಿನ ರಾಜ್ಯ ಬಜೆಟ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ್ದಾರೆ. ಇದು ಸಿದ್ದರಾಮಯ್ಯ ಅವರು ಮಂಡಿಸಿದ 15ನೇ ಬಜೆಟ್ ಆಗಿದೆ.

ರಾಜ್ಯಗಳ ಬಜೆಟ್(ವಾರ್ಷಿಕ ಹಣಕಾಸು ವಿವರಣೆ) ಬಗ್ಗೆ ಸಂವಿಧಾನದ 202 ನೇ ವಿಧಿಯಲ್ಲಿ ಹೇಳಲಾಗಿದೆ.

## ಆಯವ್ಯಯ 2024-25 ರ ಮುಖ್ಯಾಂಶಗಳು

### ಆಯವ್ಯಯ ಪಕ್ಷಿನೋಟ

- ಆಯವ್ಯಯ ಗಾತ್ರ (ಸಂಚಿತ ನಿಧಿ) 3,71,383 **ಕೋಟಿ ರೂ.**
- ಒಟ್ಟು ಸ್ವೀಕೃತಿ- 3,68,674 **ಕೋಟಿ ರೂ.**:
- ರಾಜಸ್ವ ಸ್ವೀಕೃತಿ 2,63,178 **ಕೋಟಿ ರೂ.**
- ಸಾರ್ವಜನಿಕ ಋಣ- 1,05,246 **ಕೋಟಿ ರೂ.** ಸೇರಿದಂತೆ ಬಂಡವಾಳ ಸ್ವೀಕೃತಿ 38 **ಕೋಟಿ ರೂ.**
- ಒಟ್ಟು ವೆಚ್ಚ- 3,71,383 **ಕೋಟಿ ರೂ.**
- ರಾಜಸ್ವ ವೆಚ್ಚ- 2,90,531 **ಕೋಟಿ ರೂ.**
- ಬಂಡವಾಳ ವೆಚ್ಚ- 55,877 **ಕೋಟಿ ರೂ.**
- ಸಾಲ ಮರುಪಾವತಿ- 24.794 &
- ಎಸ್.ಸಿ.ಎಸ.ಪಿ. ಹಾಗ ಟಿ.ಎಸ.ಪಿ. ಅಡಿಯಲ್ಲಿ ಆಯವ್ಯಯದಲ್ಲಿ ಒದಗಿಸಿದ ಅನುದಾನ 39,121 **ಕೋಟಿ ರೂ.** ಎಸ್.ಸಿ.ಎಸ.ಪಿ. ಅಡಿಯಲ್ಲಿ 27,674 **ಕೋಟಿ ರೂ.** ಹಾಗೂ ಟಿ.ಎಸ.ಪಿ. ಅಡಿಯಲ್ಲಿ 11,447 **ಕೋಟಿ ರೂ.**
- ಮಹಿಳಾ ಆಯವ್ಯಯದಲ್ಲಿ ಒದಗಿಸಿದ ಅನುದಾನ 86,423 **ಕೋಟಿ ರೂ.**
- ಮಕ್ಕಳ ಆಯವ್ಯಯದಲ್ಲಿ ಒದಗಿಸಿದ ಅನುದಾನ- 54,617 **ಕೋಟಿ ರೂ.**

BANGALORE IAS Academy

### 2024-25 ನೇ ಸಾಲಿನ ಹೊಸ ಯೋಜನೆಗಳು

#### ಕೃಷಿ

**ಕೃಷಿ ಅಭಿವೃದ್ಧಿ ಪ್ರಾಧಿಕಾರ:** ವಿವಿಧ ರೈತಪರ ಯೋಜನೆಗಳನ್ನು ಒಗ್ಗೂಡಿಸಿ ಸಮಗ್ರ ಕೃಷಿ ಉತ್ತೇಜಿಸುವ ಕರ್ನಾಟಕ ರೈತ ಸಮೃದ್ಧಿ ಯೋಜನೆ ಜಾರಿ ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ **ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ**.

**ನಮ್ಮ ಮಿಲ್ಲೆಟ್**: ಕೈಗೆಟಕುವ ದರದಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಮತ್ತು ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಒದಗಿಸಲು ನಮ್ಮ ಮಿಲ್ಲೆಟ್ ಹೊಸ ಕಾರ್ಯಕ್ರಮ ಪ್ರಾರಂಭ.

**e-SAP ತಂತ್ರಾಂಶ**: ರೈತರಿಗೆ ಕೀಟ, ರೋಗ ಮತ್ತು ಪೋಷಕಾಂಶ ನಿರ್ವಹಣೆಯ ಸಲಹೆಗೆ ರೈತರಿಗೆ ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿ ಪಡಿಸಿದ e-SAP ತಂತ್ರಾಂಶದ ಪರಿಚಯ.

**ಪ್ರತ್ಯೇಕ ಕೃಷಿ ಆಯುಕ್ತಾಲಯ ಸ್ಥಾಪನೆ**: ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಪರಿಣಾಮಕಾರಿ ಕಾರ್ಯನಿರ್ವಹಣೆಗೆ ಕೃಷಿ ಇಲಾಖೆ ಅಧೀನದಲ್ಲಿ ಪ್ರತ್ಯೇಕ ಕೃಷಿ ಆಯುಕ್ತಾಲಯ ಸ್ಥಾಪನೆ.

ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ರಫ್ತನ್ನು ಉತ್ತೇಜಿಸಲು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆಯನ್ನು ಬಲಪಡಿಸಲು PMFME ಯೋಜನೆಯಡಿ 80 ಕೋಟಿ ರೂ.

**ಆಹಾರ ಪಾರ್ಕ್:** ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ ಆಹಾರ ಪಾರ್ಕ್ ಸ್ಥಾಪನೆ.

ಕೃಷಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಆಧರಿಸಿ ಬೆಳೆಯ ಉತ್ಪಾದಕತೆ ಮುನ್ಸೂಚನೆಯನ್ನು ನೀಡಲು ದತ್ತಾಂಶ ಅಭಿವೃದ್ಧಿ.

**ತೋಟಗಾರಿಕೆ**

- **ಕಿಸಾನ್ ಮಾಲ್ ಸ್ಥಾಪನೆ:** ತೋಟಗಾರಿಕೆ ಕುರಿತು ತಾಂತ್ರಿಕ ಸಲಹೆ, ಮಾರುಕಟ್ಟೆ ಸಂಪರ್ಕ, ಬೇಸಾಯ ಪರಿಕರಗಳು ಮತ್ತು ಉತ್ಪನ್ನಗಳನ್ನು ಒಂದೇ ಸೂರಿನಡಿ ಒದಗಿಸಲು ಆಯ್ದ ಜಿಲ್ಲೆಗಳಲ್ಲಿ ಕಿಸಾನ್ ಮಾಲ್ ಸ್ಥಾಪನೆ.
- **ವಾಣಿಜ್ಯ ಪುಷ್ಪ ಮಾರುಕಟ್ಟೆ**: **ಬೆಂಗಳೂರಿನ**ಲ್ಲಿ ಸುಸಜ್ಜಿತವಾದ ಅಂತಾರಾಷ್ಟ್ರೀಯ ಮಟ್ಟದ ವಾಣಿಜ್ಯ ಪುಷ್ಪ ಮಾರುಕಟ್ಟೆ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪನೆ.
- **ಕೊಯ್ಲೋತ್ತರ ನಿರ್ವಹಣಾ ಕೇಂದ್ರ**: ತೋಟಗಾರಿಕೆ ಬೆಳೆಗಳ ಸಂಸ್ಕರಣೆ ಮತ್ತು ರಫ್ತನ ಪ್ರಮಾಣ ಹೆಚ್ಚಿಸಲು ಕೊಯ್ಲೋತ್ತರ ನಿರ್ವಹಣಾ ಕೇಂದ್ರ (Packhouse) ಹಾಗೂ ಮೌಲ್ಯವರ್ಧನ ಸಂಸ್ಕರಣಾ ಘಟಕಗಳ ಸ್ಥಾಪನೆ.
- **ಸ್ಪೈಸ್ ಪಾರ್ಕ್**: **ಚಿಕ್ಕಮಗಳೂರು ಜಿಲ್ಲೆ**ಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಪೈಸ್ ಪಾರ್ಕ್ (Spice Park) .
- **ತೋಟಗಾರಿಕೆ ಕಾಲೇಜು**: **ವಿಜಯಪುರ ಜಿಲ್ಲೆಯ ಆಲಮೇಲದಲ್ಲಿ** ತೋಟಗಾರಿಕೆ ಕಾಲೇಜು ಸ್ಥಾಪನೆ.

**ರೇಷ್ಮೆ**

- ರಾಮನಗರ ಮತ್ತು ಶಿಡ್ಲಘಟ್ಟದಲ್ಲಿ ಅತ್ಯಾಧುನಿಕ ರೇಷ್ಮೆ ಮಾರುಕಟ್ಟೆ ನಿರ್ಮಾಣದ ಎರಡನೇ ಹಂತ ಕಾಮಗಾರಿ ಕೈಗೆತ್ತಿಕೊಳ್ಳಲು ಕ್ರಮ.
- ರೇಷ್ಮೆ ನೂಲು ಬಿಚ್ಚಾಣಿಕೆದಾರರು ಉತ್ಪಾದಿಸಿದ ಕಚ್ಚಾ ರೇಷ್ಮೆಗೆ ಪ್ರೋತ್ಸಾಹ ಧನ ನೀಡಲಾಗುವುದು
- ಬೈವೋಲ್ಟಿನ್ ರೇಷ್ಮೆಗೂಡುಗಳಿಗೆ ನೀಡುವ ಪ್ರೋತ್ಸಾಹಧನ ಪ್ರತಿ ಕಿಲೋಗೆ 30 ರೂ. ಗೆ ಹೆಚ್ಚಳ.
  **ಪಶುಸಂಗೋಪನೆ**
- ಕರ್ನಾಟಕ ರೈತ ಸಮೃದ್ಧಿ ಯೋಜನೆಯೊಂದಿಗೆ ಸಂಯೋಜಿಸಿ ಕುರಿ ಸಾಕಾಣಿಕೆ, ಹೈನುಗಾರಿಕೆ, ಹಂದಿ ಮತ್ತು ಕೋಳಿ ಸಾಕಾಣಿಕೆಗೆ ಉತ್ತೇಜನ.
- ರಾಜ್ಯದ ಆಯ್ದ 20 ತಾಲ್ಲೂಕುಗಳ ಪಶು ಆಸ್ಪತ್ರೆಗಳನ್ನು ಪಾಲಿಕ್ಲಿನಿಕ್‌ಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು

BANGALORE IAS Academy

- **ಕುರಿಗಾಹಿಗಳ ಮತ್ತು ಸ್ವತ್ತುಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆ**: ವಲಸೆ ಕುರಿಗಾರರ ಅಭ್ಯುದಯಕ್ಕೆ ಕ್ರಮ ಹಾಗೂ ಅವರ ಮೇಲಿನ ಶೋಷಣೆ ಮತ್ತು ದೌರ್ಜನ್ಯ ತಡೆಯಲು 'ಕುರಿಗಾಹಿಗಳ ಮತ್ತು ಸ್ವತ್ತುಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆ' ಜಾರಿ

**ಮೀನುಗಾರಿಕೆ**

- ಮೀನುಗಾರಿಕೆ ಕ್ಷೇತ್ರದ ಅಭಿವೃದ್ಧಿಗೆ ಮುಂದಿನ ವರ್ಷಗಳಲ್ಲಿ 3,000 ಕೋಟಿ ರೂ.ಗಳಷ್ಟು ಬೃಹತ್ ಗಾತ್ರದ ವಿವಿಧ ಯೋಜನೆಗಳ ಅನುಷ್ಠಾನ
- ಮೀನುಗಾರರ ರಕ್ಷಣೆಗೆ ಸಮುದ್ರ ಅಂಬ್ಯುಲೆನ್ಸ್ ಖರೀದಿ
- **ಮತ್ಸ್ಯ ಆಶಾಕಿರಣ ಯೋಜನೆ:** ಯೋಜನೆಯಡಿ ಕರಾವಳಿ ಮೀನುಗಾರರ ಪರಿಹಾರದ ರಾಜ್ಯದ ಪಾಲು 3,000 ರೂ. ಗಳಿಗೆ ಹೆಚ್ಚಳ.
- ವಿವಿಧ ವಸತಿ ಯೋಜನೆಗಳಡಿ 10,000 ವಸತಿರಹಿತ ಮೀನುಗಾರರಿಗೆ ಮನೆ ನಿರ್ಮಿಸಲು ಸಹಾಯಧನ.

**ಸಹಕಾರ**

- ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಬಡ್ಡಿ ಮನ್ನಾ ಹಿನ್ನೆಲೆಯಲ್ಲಿ ಡಿಸಿಸಿ ಮತ್ತು ಪಿಕಾರ್ಡ್ ಬ್ಯಾಂಕುಗಳಿಗೆ 450 ಕೋಟಿ ರೂ. ಅನುದಾನ: ಟಿ.ಎ.ಪಿ.ಸಿ.ಎಂ.ಎಸ್.ಗಳಿಗೆ ಗೋದಾಮು ನಿರ್ಮಾಣಕ್ಕೆ ಶೇ. 6ರ ಬಡ್ಡಿ ಸಹಾಯಧನ
- ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಮೀಸಲಾತಿ ತರಲು ಅಧಿನಿಯಮಗಳಿಗೆ ತಿದ್ದುಪಡಿ
- ಕೃಷಿ ಉತ್ಪನ್ನ ಸಂಸ್ಕರಣೆ, ಮಾರುಕಟ್ಟೆ ಸಂಪರ್ಕ ಮತ್ತು ಮೌಲ್ಯವರ್ಧನೆಗೆ ಪೂರಕ ಕ್ರಮಗಳು:
- **7 ಶೀತಲಗೃಹ ನಿರ್ಮಾಣ.**
- **ಒಣಮೆಣಸಿನಕಾಯಿ ಮಾರುಕಟ್ಟೆ**: ರಾಯಚೂರು ಹಾಗೂ ರಾಣೆಬೆನ್ನೂರಿನಲ್ಲಿ ಪ್ರಾರಂಭ.
- **ಅತ್ಯಾಧುನಿಕ ಕೃಷಿ ಸಂಕೀರ್ಣ** : ಮಂಗಳೂರಿನಲ್ಲಿ ಸ್ಥಾಪನೆ.
- ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಎಲ್ಲಾ ಕಾರ್ಯ ಚಟುವಟಿಕೆಗಳ ಡಿಜಿಟಲೀಕರಣ.
- **Weigh Bridge** : ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ತೂಕದಲ್ಲಾಗುವ ಮೋಸ ತಡೆಗಟ್ಟಲು ಎಲ್ಲಾ ಸಕ್ಕರೆ ಕಾರ್ಖಾನೆಗಳ ಬಳಿ ಎಪಿಎಂಸಿಗಳ ಮೂಲಕ Weigh Bridge ಗಳ ಸ್ಥಾಪನೆ.

**ಜಲಸಂಪನ್ಮೂಲ**

ಕಾವೇರಿ ಕಣಿವೆಯ ಮಹತ್ವಾಕಾಂಕ್ಷಿ ಯೋಜನೆಯಾದ ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ಅನುಷ್ಠಾನ ಒಂದು ಪ್ರತ್ಯೇಕ ಯೋಜನಾ ವಿಭಾಗವನ್ನು ಹಾಗೂ 2 ಉಪವಿಭಾಗಗಳ ಸ್ಥಾಪನೆ.

BANGALORE IAS Academy

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ದೊಡ್ಡನಗರದ ಬಳಿಯ ವಿತರಣಾ ತೊಟ್ಟಿಯವರೆಗೆ ಪೂರ್ವ ಪರೀಕ್ಷಾರ್ಥ ಚಾಲನೆ.

ಭದ್ರಾ ಮೇಲ್ದಂಡೆ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಸುಮಾರು 75,000 ಎಕರೆ ನೀರಾವರಿ ಸಾಮರ್ಥ್ಯ ಕಲ್ಪಿಸುವ ಗುರಿ.

ಕೊಪ್ಪಳ ಜಿಲ್ಲೆಯ ನವಲಿ ಬಳಿ ಸಮತೋಲನಾ ಜಲಾಶಯ ನಿರ್ಮಾಣ ಯೋಜನೆಯ ವಿವರವಾದ ಯೋಜನಾ ವರದಿ ಸಿದ್ಧ; ಯೋಜನೆಯ ಅನುಷ್ಠಾನ ಸಂಬಂಧ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಸಮಾಲೋಚನೆ ಪ್ರಾರಂಭ.

KRS ನ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಯ ಪ್ರವಾಸೋದ್ಯಮ ಆಕರ್ಷಣೀಯ ಕೇಂದ್ರವನ್ನಾಗಿ ಉನ್ನತೀಕರಣ.

**ಧಾರವಾಡದಲ್ಲಿರುವ ವಾಲ್ಮೀ ಸಂಸ್ಥೆಯನ್ನು Centre of Excellence in Water Management** ಆಗಿ ಉನ್ನತೀಕರಿಸಲು ಕ್ರಮ.

ಪ್ರಗತಿಯಲ್ಲಿರುವ ಹೇಮಾವತಿ ಯೋಜನೆ ವೈನಾಲೆಯಡಿ 5.45 ಕಿ.ಮೀ ಉದ್ದದ ಹಾಗೂ ತುಮಕೂರು ಶಾಖಾ ನಾಲೆಯಡಿ 166.90 ಕಿ.ಮೀ. ಉದ್ದದ ನಾಲೆಯ ಆಧುನೀಕರಣ ಕಾಮಗಾರಿ ಪೂರ್ಣಗೊಳಿಸಲು ಕ್ರಮ.

ಕರ್ನಾಟಕ ನೀರಾವರಿ ನಿಗಮದಡಿ ವಿವಿಧ ಏತ ನೀರಾವರಿ ಯೋಜನೆಗಳ ಅನುಷ್ಠಾನ: 97,698 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ.

ಕೃಷ್ಣಾ ಭಾಗ್ಯ ಜಲನಿಗಮದಡಿ ಏತ ನೀರಾವರಿ ಯೋಜನೆಗಳ ಅನುಷ್ಠಾನ. 1,09,350 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ.

ಯಲಬುರ್ಗಾ-ಕುಕನೂರು ತಾಲ್ಲೂಕಿನಲ್ಲಿ 38 ಕೆರೆಗಳನ್ನು ತುಂಬಿಸುವ ಯೋಜನೆ ಹಾಗೂ ಮಸ್ಕಿ ತಾಲ್ಲೂಕಿನ ಪಾಮನಕಲ್ಲೂರು ಹಾಗೂ ಇತರ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಯೋಜನೆ ಅನುಷ್ಠಾನ.

ಕಲಬುರಗಿ ನಗರಕ್ಕೆ ಕುಡಿಯುವ ನೀರು ಸರಬರಾಜಿಗಾಗಿ ಬೆಣ್ಣೆತೊರಾ ಜಲಾಶಯಕ್ಕೆ ಭೀಮಾ ಮತ್ತು ಕಾಗಿಣಾ ನದಿಗಳಿಂದ ನೀರು ತುಂಬಿಸುವ ಯೋಜನೆ ಜಾರಿ.

ಧಾರವಾಡ ಜಿಲ್ಲೆಯಲ್ಲಿ ಬೆಣ್ಣೆಹಳ್ಳದಿಂದ ಪ್ರವಾಹ ಪೀಡಿತ ಗ್ರಾಮಗಳಿಗೆ ತಡೆಗೋಡೆ ನಿರ್ಮಾಣ.

### ಸಣ್ಣ ನೀರಾವರಿ

- 115 ಜಲ ಸಂರಕ್ಷಣಾ ಕಾಮಗಾರಿ ಅನುಷ್ಠಾನ.

BANGALORE IAS Academy

- ಕೆ.ಸಿ ವ್ಯಾಲಿ-2ನೇ ಹಂತದ ಉದ್ದೇಶಿತ 272 ಕೆರೆ ತುಂಬಿಸುವ ಯೋಜನೆ ಪೂರ್ಣಗೊಳಿಸಲು ಕ್ರಮ.

**ಶಾಲಾ ಶಿಕ್ಷಣ ಮತ್ತು ಸಾಕ್ಷರತೆ**

- ಸರ್ಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ಮತ್ತು ಅಗತ್ಯ ಮೂಲಸೌಕರ್ಯ ಒದಗಿಸಲು ಸಿ.ಎಸ್.ಆರ್. ಅನುದಾನದಡಿ, ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಆಯ್ದ ಶಾಲೆಗಳ ಉನ್ನತೀಕರಣ: 3 ರಿಂದ 5 ನೇ ತರಗತಿ ವಿದ್ಯಾರ್ಥಿಗಳಿಗೆ ಗಣಿತ-ಗಣಕ ಕಾರ್ಯಕ್ರಮ. 10 ಕೋಟಿ ರೂ. ವೆಚ್ಚದಲ್ಲಿ ಮರು ಸಿಂಚನ ಕಾರ್ಯಕ್ರಮ;
- ಆಯ್ದ ಪ್ರೌಢ ಶಾಲೆಗಳಲ್ಲಿ ವಿಜ್ಞಾನ ಹಾಗೂ ಕಂಪ್ಯೂಟರ್ ಪ್ರಯೋಗಾಲಯ, ಇಂಟರ್‌ನೆಟ್ ಸೌಲಭ್ಯ.
- ದ್ವಿಭಾಷಾ ಮಾಧ್ಯಮ ಶಾಲೆಗಳಾಗಿ 2000 ಸರ್ಕಾರಿ ಪ್ರಾಥಮಿಕ ಶಾಲೆಗಳ ಪರಿವರ್ತನೆ.
- ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಪ್ರಾರಂಭ.
- ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳಲ್ಲಿ ಪದವಿ ಪೂರ್ವ ಕಾಲೇಜುಗಳನ್ನಾಗಿ ರಾಜ್ಯದ 74 ಆದರ್ಶ ವಿದ್ಯಾಲಯಗಳ ಉನ್ನತೀಕರಣ;
- 100 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗಣಕ ವಿಜ್ಞಾನ ಸಂಯೋಜನೆ ಪ್ರಾರಂಭ.
- ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ 20,000 ವಿಜ್ಞಾನ ವಿಭಾಗದ NEET/ JEE/CET ತರಬೇತಿ ಕಾರ್ಯಕ್ರಮ

**ಉನ್ನತ ಶಿಕ್ಷಣ**

ರಾಜ್ಯದ 30 ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳು ಮತ್ತು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ಗಳ ಉನ್ನತೀಕರಣ

**ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ (UVCE) ಅಭಿವೃದ್ಧಿ**: ಐಐಟಿ ಮಾದರಿಯಲ್ಲಿ 500 ಕೋಟಿ ರೂ. ವೆಚ್ಚದಲ್ಲಿ: ಸರ್ಕಾರದಿಂದ 100 ಕೋಟಿ ರೂ. ಅನುದಾನ.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**

- ಏಳು ಜಿಲ್ಲೆಗಳಲ್ಲಿ ಕ್ರಿಟಿಕಲ್ ಕೇರ್ ಬ್ಲಾಕ್ ಕಟ್ಟಡ ನಿರ್ಮಾಣ
- ಏಳು ತಾಲ್ಲೂಕುಗಳಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆ ನಿರ್ಮಾಣ.
- ಎರಡು ವರ್ಷಗಳಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರ ಉನ್ನತೀಕರಣ.
- ಕಲ್ಯಾಣ ಕರ್ನಾಟಕ ಭಾಗದಲ್ಲಿ 46 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ.
- ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ 199 ಉಪಕೇಂದ್ರಗಳನ್ನು ಆರೋಗ್ಯ ಕ್ಷೇಮ ಕೇಂದ್ರಗಳ ಕಟ್ಟಡಕ್ಕಾಗಿ 130 ಕೋಟಿ ರೂ. ಅನುದಾನ.
- ಪ್ರತಿ ಜಿಲ್ಲೆಯಲ್ಲಿ ಒಂದು **ಡೇ-ಕೇರ್ ಕಿಮೋಥೆರಪಿ ಕೇಂದ್ರ ಸ್ಥಾಪನೆ.**

BANGALORE IAS Academy

- 20 ಜಿಲ್ಲಾ ಆಸ್ಪತ್ರೆಗಳಲ್ಲಿ Digital Mammography ಯಂತ್ರಗಳನ್ನು ಮತ್ತು ಕೆ.ಸಿ. ಜನರಲ್ ಆಸ್ಪತ್ರೆ ಬೆಂಗಳೂರು ಹಾಗೂ ಉಡುಪಿ, ಕೋಲಾರ ಮತ್ತು ದಾವಣಗೆರೆ ಜಿಲ್ಲಾ ಆಸ್ಪತ್ರೆಗಳಿಗೆ Colposcopy ಉಪಕರಣ ಖರೀದಿ
- ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕ್ಷಯ ರೋಗ ತಪಾಸಣೆಗಾಗಿ 87 True-Nat Machines ಗಳ ಖರೀದಿ
- ಉತ್ತರ ಕರ್ನಾಟಕ ಜಿಲ್ಲೆಗಳ First Referral Unit (FRU) ಎರಡು ವರ್ಷಗಳಲ್ಲಿ 50 ಹೊಸ ರಕ್ತ ಶೇಖರಣಾ ಘಟಕಗಳ ಸ್ಥಾಪನೆ.
- ಮುಂದಿನ 4 ವರ್ಷದಲ್ಲಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸಂಯೋಜಿತ ಮತ್ತು ಸಾರ್ವಜನಿಕ ಆರೋಗ್ಯ ಪ್ರಯೋಗಾಲಯವನ್ನು (IPHL) ಸ್ಥಾಪನೆ; ಮುಂದಿನ ಎರಡು ವರ್ಷಗಳಲ್ಲಿ 16 ಜಿಲ್ಲೆಗಳಲ್ಲಿ ಹಾಗೂ ಪ್ರಸಕ್ತ ಸಾಲಿನಲ್ಲಿ ತಾಲ್ಲೂಕು ಮಟ್ಟದ ಪ್ರಯೋಗಾಲಯ ಸ್ಥಾಪನೆ.
- ಬೆಂಗಳೂರಿನಲ್ಲಿ ಮುಂದಿನ ಎರಡು ವರ್ಷಗಳಲ್ಲಿ HUB and Spoke ಮಾದರಿಯಲ್ಲಿ 430 ಪ್ರಯೋಗಾಲಯಗಳ ಸ್ಥಾಪನೆ

**ವೈದ್ಯಕೀಯ ಶಿಕ್ಷಣ**

- ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಉನ್ನತೀಕರಣ.
- ಮೈಸೂರಿನಲ್ಲಿರುವ 40 ಹಾಸಿಗೆ ಸಾಮರ್ಥ್ಯದ Nephro-Urology ಆಸ್ಪತ್ರೆಯ 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಉನ್ನತೀಕರಣ.
- ಕಲಬುರಗಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಘಟಕ ಸ್ಥಾಪನೆ.
- ಬೆಂಗಳೂರಿನ ನೆಫ್ರೋ-ಯುರಾಲಜಿ ಸಂಸ್ಥೆಯ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ರೋಬೋಟಿಕ್ ಶಸ್ತ್ರಚಿಕಿತ್ಸಾ ಸೌಲಭ್ಯ ಸ್ಥಾಪಿಸಲಾಗುವುದು
- ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ Viral Research & Diagnostic Laboratory (VRDL) ಅನ್ನು ಸ್ಥಾಪಿಸಲಾಗುವುದು.
- ಡಿಜಿಟಲ್ ಹೆಲ್ತ್ ಸೊಸೈಟಿಯಡಿ Health Repository ಯನ್ನು ಸೃಜಿಸಿ ಸಾರ್ವಜನಿಕರ ಚಿಕಿತ್ಸಾ ಮಾಹಿತಿ ಒಂದೇ ಮೂಲದಿಂದ ಲಭ್ಯವಾಗುವಂತೆ ಮಾಡಲು ಕ್ರಮ.
- ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಶತಮಾನೋತ್ಸವದ ಸವಿ ನೆನಪಿಗಾಗಿ ಕೆ.ಆರ್. ಆಸ್ಪತ್ರೆ ಆವರಣದಲ್ಲಿ ಸುಸಜ್ಜಿತ ಹೊರ ರೋಗಿ ವಿಭಾಗದ ಕಟ್ಟಡ ನಿರ್ಮಾಣಕ್ಕೆ ಕ್ರಮ.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ**

- ಗೃಹಲಕ್ಷ್ಮಿ ಯೋಜನೆಗೆ 2024-25ನೇ ಸಾಲಿಗೆ 28,608 ಕೋಟಿ ರೂ. ನಿಗದಿ.

BANGALORE IAS Academy

- ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಮೇಲ್ವಿಚಾರಕಿಯರಿಗೆ 75,938 ಸ್ಮಾರ್ಟ್ ಫೋನ್ ಒದಗಿಸಲು ಕ್ರಮ.
- ರಾಜ್ಯದಲ್ಲಿ 1,000 ಅಂಗನವಾಡಿ ನಿರ್ಮಾಣ.
- Cerebral Palsy, Muscular Dystrophy, Parkinsons Multiple Sclerosis ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ 1,000 ರೂ. ಪ್ರೋತ್ಸಾಹಧನ
- ನಿರಾಶ್ರಿತ ಬೌದ್ಧಿಕ ವಿಕಲಚೇತನರ ಆರೈಕೆ ಮತ್ತು ಸಂರಕ್ಷಣೆಗಾಗಿ 4 ಅನುಪಾಲನಾ ಗೃಹಗಳ ಪ್ರಾರಂಭ.
- ಮಾಜಿ ದೇವದಾಸಿಯರ ಕಲ್ಯಾಣಕ್ಕಾಗಿ ಪ್ರಸ್ತುತ ನೀಡುತ್ತಿರುವ ಮಾಸಾಶನ 2000 ರೂ. ಗಳಿಗೆ ಹೆಚ್ಚಳ;
- ಲಿಂಗತ್ವ ಅಲ್ಪಸಂಖ್ಯಾತರಿಗೆ ಮೈತ್ರಿ ಯೋಜನೆಯಡಿ ನೀಡುವ ಮಾಸಾಶನ 1,200 ರೂ. ಗಳಿಗೆ ಹೆಚ್ಚಳ.

**ಸಮಾಜ ಕಲ್ಯಾಣ**

- ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಹಾಗೂ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನ ಮಾಸಿಕ ಭೋಜನ ವೆಚ್ಚ ತಲಾ 100 ರೂ. ಹೆಚ್ಚಳ.
- ಕ್ರೈಸ್ ಅಡಿಯಲ್ಲಿ ಒಟ್ಟು 29 ವಸತಿ ಶಾಲಾ ಸಂಕೀರ್ಣಗಳ ನಿರ್ಮಾಣ: 20 ಹೋಬಳಿಗಳಲ್ಲಿ ಹೊಸ ವಸತಿ ಶಾಲೆಗಳ ಪ್ರಾರಂಭ.
- 18 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣ: 31 ಹೊಸ ಮೆಟ್ರಿಕ್ ನಂತರದ ವಸತಿನಿಲಯ ಮಂಜೂರು ಮಾಡಲು ಕ್ರಮ.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ವಿರಳ ಮತ್ತು ದುಬಾರಿ ವೆಚ್ಚದ ಚಿಕಿತ್ಸಾ ಸೇವೆಗಳನ್ನು ಒದಗಿಸಲು 35 ಕೋಟಿ ರೂ.ಗಳ Corpus Fund ಸ್ಥಾಪನೆ.
- ಪದ್ಮಶ್ರೀ ಡಾ. ಸಿದ್ದಲಿಂಗಯ್ಯ ಅವರ ಸ್ಮರಣಾರ್ಥ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಗ್ರಂಥಾಲಯ ಸ್ಥಾಪನೆ.

**ಪರಿಶಿಷ್ಟ ಪಂಗಡಗಳ ಕಲ್ಯಾಣ**

- **ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ**: ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆಶ್ರಮ ಶಾಲೆಗಳಿಗೆ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ಎಂದು ಮರುನಾಮಕರಣ ಮಾಡಿ 5 ಹಾಗೂ 7 ನೇ ತರಗತಿವರೆಗೆ ಇರುವ ಈ ಶಾಲೆಗಳಲ್ಲಿ ಕ್ರಮವಾಗಿ ಆರನೇ ಹಾಗೂ ಎಂಟನೇ ತರಗತಿ ಪ್ರಾರಂಭಿಸಲು ಕ್ರಮ ಹಾಗೂ ಪ್ರತಿ ತರಗತಿಯ ವಿದ್ಯಾರ್ಥಿಗಳ ಸಂಖ್ಯಾಬಲ 25 ರಿಂದ 40ಕ್ಕೆ ಹೆಚ್ಚಳ.
- IISc, IIT ಮತ್ತು NIT ಸಂಸ್ಥೆಗಳ ಮೂಲಕ ವೃತ್ತಿಪರ ತರಬೇತಿ ಕೋರ್ಸ್‌ಗೆ ದಾಖಲಾಗುವ 200 ಇಂಜಿನಿಯರಿಂಗ್ ಪದವೀಧರರಿಗೆ 15,000 ರೂ. ಗಳ ಶಿಷ್ಯವೇತನ ನೀಡಲು ಕ್ರಮ.

BANGALORE IAS Academy

- 5,000 ಯುವಕ/ಯುವತಿಯರಿಗೆ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ತರಬೇತಿ.
- ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ, ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ 25,000 ರೂ.ಗಳ ಶಿಷ್ಯವೇತನ ಸೌಲಭ್ಯ.
- 23 ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ಏಕಲವ್ಯ ಮಾದರಿಯ ಪ್ರತಿ ವಸತಿ ಶಾಲೆಯಲ್ಲಿ 20 ಸೀಟು ಮೀಸಲು ಹಾಗೂ ಪಡಿತರ ಚೀಟಿ ಮುಂತಾದ ಸರ್ಕಾರಿ ದಾಖಲೆಗಳನ್ನು ಒದಗಿಸಲು ವಿಶೇಷ ಕೋಶ ಸ್ಥಾಪನೆ.

**ಹಿಂದುಳಿದ ವರ್ಗಗಳ ಕಲ್ಯಾಣ**

- ಹಿಂದುಳಿದ ವರ್ಗಗಳ 150 ಮೆಟ್ರಿಕ್ ನಂತರದ ಹೊಸ ವಸತಿನಿಲಯಗಳ ಪ್ರಾರಂಭ; 174 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸಲು ಕ್ರಮ.
- ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ CLAT, MAT ಮತ್ತು Chartered Accountant ಫೌಂಡೇಷನ್ ಪರೀಕ್ಷಾ ಪೂರ್ವ ತರಬೇತಿ.
- 500 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ತರಬೇತಿ ಸಂಸ್ಥೆಗಳಿಂದ ಎರಡು ವರ್ಷಗಳ JEE/NEET ಉಚಿತ ತರಬೇತಿ ನೀಡಲು ಕ್ರಮ.
- **ಕರ್ನಾಟಕ ಅಲೆಮಾರಿ ಆಯೋಗ ರಚನೆ**: ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳ ಸ್ಥಿತಿಗತಿ ಅಧ್ಯಯನಕ್ಕಾಗಿ ಅಭಿವೃದ್ಧಿಗಾಗಿ ಕರ್ನಾಟಕ ಅಲೆಮಾರಿ ಆಯೋಗ ರಚನೆ.

**ಅಲ್ಪಸಂಖ್ಯಾತರ ಕಲ್ಯಾಣ**

- 50 ಸಂಖ್ಯಾಬಲವುಳ್ಳ 50 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, 100 ಸಂಖ್ಯಾಬಲವುಳ್ಳ 100 ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳು, 100 ಹೊಸ ಮೌಲಾನಾ ಆಜಾದ್ ಶಾಲೆಗಳ ಪ್ರಾರಂಭ ಹಾಗೂ 25 ಶಾಲೆಗಳಲ್ಲಿ ಪದವಿ ಪೂರ್ವ ಶಿಕ್ಷಣ ಪ್ರಾರಂಭ.
- ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಘಟಕಗಳ ಉನ್ನತೀಕರಣಕ್ಕೆ KSFC ಮೂಲಕ ಪಡೆಯುವ 10 ಕೋಟಿ ರೂ.ವರೆಗಿನ ಸಾಲಕ್ಕೆ ಶೇ.6 ರಷ್ಟು ಬಡ್ಡಿ ಸಹಾಯಧನ ಸೌಲಭ್ಯ.
- ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಉತ್ತೇಜನ ನೀಡಲು ಅನುದಾನ.
- ಸಿಖ್ ಲಿಗಾರ್ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕಾಗಿ ಹಾಗೂ ಬೀದರ್ ಗುರುದ್ವಾರ ಅಭಿವೃದ್ಧಿಗೆ ಅನುದಾನ.

**ವಸತಿ**

2024-25 ರಲ್ಲಿ 3 ಲಕ್ಷ ಮನೆಗಳ ನಿರ್ಮಾಣದ ಗುರಿ

BANGALORE IAS Academy

ನಗರ ಪ್ರದೇಶದ ಬಡವರಿಗೆ ವಸತಿ ಸೌಲಭ್ಯಕ್ಕಾಗಿ ಸಂಪನ್ಮೂಲ ಕ್ರೋಢೀಕರಿಸಲು ಪ್ರಸ್ತಾಪಿಸಿದ ಸುಧಾರಣಾ ಕ್ರಮಗಳು: Asset Monetisation, Karnataka Affordable Housing Fund (KAHF)

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯ್ದೆಯಡಿ ಕೊಳೆಗೇರಿ ಸೆಸ್ ದರ ಪರಿಷ್ಕರಣೆ: ಕರ್ನಾಟಕ ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಸ್ಥಿರ ಆಸ್ತಿಗಳಿಂದ ಸಂಪನ್ಮೂಲ ಸೃಜನೆಗೆ ಕ್ರಮ.

**ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು**

- ಅನ್ನಭಾಗ್ಯ ಯೋಜನೆಯಡಿ ಜನವರಿ 2024ರ ಅಂತ್ಯದವರೆಗೆ 4.02 ಕೋಟಿ ಫಲಾನುಭವಿಗಳಿಗೆ 4,595 ಕೋಟಿ ರೂ. ವರ್ಗಾವಣೆ.
- **ಅನ್ನ-ಸುವಿಧಾ ಯೋಜನೆ:** 80 ವರ್ಷ ದಾಟಿದ ಹಿರಿಯ ನಾಗರಿಕರು ಮಾತ್ರ ಇರುವ ಮನೆಯ ಬಾಗಿಲಿಗೆ ಆಹಾರ ಧಾನ್ಯಗಳನ್ನು ತಲುಪಿಸಲು ಅನ್ನ-ಸುವಿಧಾ ಯೋಜನೆ ಜಾರಿ.

**ಕಾರ್ಮಿಕ**

- Platform-Based Gig Workers Fund and Welfare Fee Bill ಎಂಬ ಹೊಸ ವಿಧೇಯಕ ಜಾರಿಯ ಮೂಲಕ ಗಿಗ್ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮ ರೂಪಿಸಲು ಕ್ರಮ.
- **ಆಶಾದೀಪ ಯೋಜನೆ:** ಯೋಜನೆಯಡಿ ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಸೌಲಭ್ಯ ವಿಸ್ತರಣೆ ಮೂಲಕ ಶಿಷ್ಯವೇತನ ಅವಧಿ ಒಂದು ವರ್ಷಕ್ಕೆ ಹೆಚ್ಚಳ, ಖಾಯಂ ನೇಮಕಾತಿ ಮಾಡಿಕೊಂಡಲ್ಲಿ ವೇತನ ಮರುಪಾವತಿ ಅವಧಿ ಎರಡು ವರ್ಷಕ್ಕೆ ಹೆಚ್ಚಳ ಹಾಗೂ ವೇತನದ ಗರಿಷ್ಠ ಮಿತಿ 7,000 ರೂ. ಗಳಿಗೆ ಹೆಚ್ಚಳ.
- ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ತಾತ್ಕಾಲಿಕ ವಸತಿ ಸೌಲಭ್ಯ ಒದಗಿಸಲು ಆಯ್ದ 10 ಜಿಲ್ಲೆಗಳಲ್ಲಿ ತಾತ್ಕಾಲಿಕ ವಸತಿ ಸಮುಚ್ಚಯ ನಿರ್ಮಾಣ.
- ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮೂಲಕ ಸಾರಿಗೆ ವಾಹನಗಳ ಕಾರ್ಮಿಕರಿಗೆ ಭದ್ರತಾ ಮತ್ತು ಕಲ್ಯಾಣ ಕಾರ್ಯಕ್ರಮಗಳ ಜಾರಿ
- ಇ.ಎಸ್.ಐ ಯೋಜನೆಯಡಿ ವಿವಿಧ ಸೇವೆ ಹಾಗೂ ಸೌಲಭ್ಯಗಳ ವಿಸ್ತರಣೆ.

**ಕೌಶಲ್ಯಾಭಿವೃದ್ಧಿ**

- ಯುವಜನರಿಗೆ ಉತ್ತಮ ಉದ್ಯೋಗ ಮತ್ತು ಉದ್ಯಮ ಅವಕಾಶಗಳನ್ನು ಒದಗಿಸಲು ರಾಜ್ಯ ಕೌಶಲ್ಯ ನೀತಿ ಜಾರಿ
- ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ 25,000 ಫಲಾನುಭವಿಗಳಿಗೆ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ.
- **ಸ್ಕಿಲ್ ಅಕಾಡೆಮಿ**: ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಸ್ಥಾಪನೆ.
    - ಕಲಬುರಗಿ, ತಳಕಲ್ ಮತ್ತು ಮೈಸೂರಿನ ವರುಣಾದಲ್ಲಿ ಜಿ.ಟಿ.ಟಿ.ಸಿ. ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರಗಳ ಸ್ಥಾಪನೆ.

BANGALORE IAS Academy

- ಬಳ್ಳಾರಿ, ಚಿತ್ರದುರ್ಗ, ರೋಣದಲ್ಲಿ ಒಟ್ಟು 150 ಕೋಟಿ ರೂ. ವೆಚ್ಚದಲ್ಲಿ ಹೊಸ ಜಿ.ಟಿ.ಟಿ.ಸಿ (Graduate Basic Training College) ಗಳ ಪ್ರಾರಂಭ.
- ಕಲಬುರಗಿಯ ಕೆ.ಜಿ.ಟಿ.ಟಿ.ಐ.ನಲ್ಲಿ 16 ಕೋಟಿ ರೂ. ವೆಚ್ಚದಲ್ಲಿ ಸಿ.ಎನ್.ಸಿ (Computer Numerical Control) ಮೊದಲ ಶ್ರೇಷ್ಠತಾ ಕೇಂದ್ರ ಸ್ಥಾಪನೆ.
- 40,000 ಐ.ಟಿ.ಐ. ಮತ್ತು ಜಿ.ಟಿ.ಟಿ.ಸಿ. ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಮತ್ತು ಸಂವಹನ ಕೌಶಲ್ಯ ತರಬೇತಿ
- ರಾಜ್ಯದ ಎಲ್ಲಾ ಐ.ಟಿ.ಐ ಗಳಲ್ಲಿ ಸ್ಥಳೀಯ ಕೈಗಾರಿಕೆಗಳು ಹಾಗೂ ಉದ್ಯಮಗಳ ಸಹಭಾಗಿತ್ವದಲ್ಲಿ Dual System of Training (DST) ವಿಸ್ತರಣೆ .
- ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಸ್ಕಿಲ್ ಕನೆಕ್ಸ್ ಸಮಿಟ್ (Skill Connect Summit)
- ಎರಡು ವರ್ಷದಲ್ಲಿ 50.000 ಎಸ್.ಹೆಚ್.ಜಿ. ಮಹಿಳಾ ಸ್ವಾಮ್ಯದ ಸೂಕ್ಷ್ಮ ಉದ್ಯಮಗಳ ಅಭಿವೃದ್ಧಿಗೆ ಕ್ರಮ ಹಾಗೂ ಒಂದು ಲಕ್ಷ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ವಿವಿಧ ಕಿರು ಉದ್ದಿಮೆಗಳನ್ನು ಸ್ಥಾಪಿಸಲು ಮತ್ತು ಅವುಗಳಿಗೆ ಸೂಕ್ತ ಮಾರುಕಟ್ಟೆ ಅವಕಾಶಗಳನ್ನು ಕಲ್ಪಿಸಲು ಕ್ರಮ.
- **ಐಐಎಂಬಿ ಸಹಭಾಗಿತ್ವದಲ್ಲಿ 10 ಜಿಲ್ಲಾ ಮಟ್ಟದ ಇನ್‌ಕ್ಯುಬೇಷನ್ ಕೇಂದ್ರಗಳ ಸ್ಥಾಪನೆ.**
- ಗ್ರಾಮೀಣ ಪ್ರದೇಶದಲ್ಲಿ ಕೆಫೆ ಸಂಜೀವಿನಿ ಎಂಬ ಮಹಿಳೆಯರೇ ನಡೆಸುವ ಕ್ಯಾಂಟೀನ್‌ಗಳ ಸ್ಥಾಪನೆ ಹಾಗೂ 2,500 ಕಾಫಿ ಕಿಯಾಸ್ಕ್ ಸ್ಥಾಪನೆಗೆ ಕ್ರಮ.

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್**

- **ಪ್ರಗತಿ ಪಥ ಯೋಜನೆ:** 189 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ಒಟ್ಟಾರೆ 9,450 ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು ಅಭಿವೃದ್ಧಿ
- **ಕಲ್ಯಾಣ ಪಥ ಯೋಜನೆ:** ಕಲ್ಯಾಣ ಕರ್ನಾಟಕದ 38 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ಒಟ್ಟು 1,150 ಕಿ.ಮೀ. ರಸ್ತೆ ಅಭಿವೃದ್ಧಿ.
- ನರೇಗಾ ಯೋಜನೆಯಡಿ 2024-25 ರಲ್ಲಿ 16 ಕೋಟಿ ಮಾನವ ದಿನಗಳನ್ನು ಸೃಜನೆಯ ಗುರಿ.
- ಅರಿವು ಕೇಂದ್ರಗಳ ಬಲವರ್ಧನೆ
- ಕೌನ್ಸಿಲಿಂಗ್ ಮೂಲಕ ಪಂಚಾಯಿತಿ ಸಿಬ್ಬಂದಿ ವರ್ಗಾವಣೆ, ಗ್ರಾಮ ಪಂಚಾಯಿತಿ ಸ್ವತ್ತುಗಳ Asset Monetisation ನೀತಿ ಜಾರಿ: ಗ್ರಾಮ ಪಂಚಾಯತಿಗಳಲ್ಲಿ ಇ-ಆಫೀಸ್ ಪ್ರಾರಂಭ; ಬಾಪೂಜಿ ಸೇವಾ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಲಭ್ಯವಿರುವ ಸೇವೆಗಳ ಪ್ರಾರಂಭ;

**ಸುಧಾರಣೆಗೆ ಕ್ರಮ.**

- ಗ್ರಾಮ ಪಂಚಾಯತಿಗಳಲ್ಲಿನ ವಿದ್ಯುತ್ ವೆಚ್ಚ ಕಡಿಮೆ ಮಾಡಲು 50 ಪಂಚಾಯಿತಿಗಳಲ್ಲಿ ಸೋಲಾರ್ ದೀಪ ಅಳವಡಿಕೆ

BANGALORE IAS Academy

- **ಗ್ರಾಮೀಣ ಪ್ರದೇಶದಲ್ಲಿ ಸುಸ್ಥಿರ ಘನತ್ಯಾಜ್ಯ** ನಿರ್ವಹಣೆಗೆ ವರ್ತುಲ ಆರ್ಥಿಕತೆ ಮಾದರಿಗೆ ಪ್ರೋತ್ಸಾಹ.
- ಜೀತ ಕಾರ್ಮಿಕ ಪದ್ಧತಿಯಿಂದ ಬಿಡುಗಡೆಗೊಂಡ ಕಾರ್ಮಿಕರ ಪುನರ್ವಸತಿಗಾಗಿ ನೀಡುವ ಮಾಸಿಕ ಪ್ರೋತ್ಸಾಹಧನ 2,000 ರೂ.ಗಳಿಗೆ ಹೆಚ್ಚಳ.

**ಯೋಜನೆ**

- 2024-25 ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಯೋಜನೆಗಳ ಅನುಷ್ಠಾನ.
- **ಡಾ| ಡಿ.ಎಂ. ನಂಜುಂಡಪ್ಪ ವರದಿಯನ್ವಯ** ಜಾರಿಗೊಳಿಸಿದ ವಿಶೇಷ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಆಗಿರುವ ಬದಲಾವಣೆಗಳು ಮತ್ತು ಪರಿಣಾಮಗಳನ್ನು ಅಧ್ಯಯನ ಮಾಡಲು ಪ್ರಸಕ್ತ ಸಾಲಿನಲ್ಲಿ ಉನ್ನತಾಧಿಕಾರ ಸಮಿತಿ ರಚನೆ.

**ನಗರಾಭಿವೃದ್ಧಿ**

- ಬೆಂಗಳೂರು ನಗರವನ್ನು ವಿಶ್ವದರ್ಜೆಯ ನಗರವಾಗಿ ಅಭಿವೃದ್ಧಿಪಡಿಸಲು ಬ್ರಾಂಡ್ ಬೆಂಗಳೂರು ಪರಿಕಲ್ಪನೆ ಜಾರಿ.
- ಬಿ.ಬಿ.ಎಂ.ಪಿ ಯಲ್ಲಿ ತೆರಿಗೆ ಮತ್ತು ತೆರಿಗೆಯೇತರ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಆದ್ಯತೆ: 2024-25ರಲ್ಲಿ 6,000 ಕೋಟಿ ರೂ. ತೆರಿಗೆ ಸಂಗ್ರಹದ ನಿರೀಕ್ಷೆ
- ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಳಿಸುವುದು, ನಗರದ ಪ್ರಮುಖ 28 0 Area Traffic Signal Control System ಅಳವಡಿಕೆ, ಹೆಬ್ಬಾಳ ಜಂಕ್ಷನ್‌ನಲ್ಲಿ ಸುರಂಗ ಮಾರ್ಗ ನಿರ್ಮಾಣ, ಮೊದಲಾದ ಯೋಜನೆಗಳ ಮೂಲಕ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಆದ್ಯತೆ.
- **ಬೆಂಗಳೂರು ಬ್ಯುಸಿನೆಸ್ ಕಾರಿಡಾರ್:** ಪೆರಿಫೆರಲ್ ರಿಂಗ್ ರೋಡ್ ಅನ್ನು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಎಂಬ ಹೊಸ ಪರಿಕಲ್ಪನೆಯಲ್ಲಿ ಅಭಿವೃದ್ಧಿ ಪಡಿಸಲು ಕ್ರಮ.
- **ಬೆಂಗಳೂರು ನಗರದಲ್ಲಿ 250 ಮೀಟರ್ ಎತ್ತರದ ಸ್ಕೈ-ಡೆಕ್ (Sky-Deck) ನಿರ್ಮಾಣಕ್ಕೆ ಕ್ರಮ.**
- ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸೇವೆಗೆ 1,334 ಹೊಸ ಎಲೆಕ್ಟ್ರಿಕ್ ಬಸ್‌ಗಳು ಮತ್ತು 820 ಬಿಎಸ್-6 ಡೀಸೆಲ್ ಬಸ್ಸುಗಳ ಸೇರ್ಪಡೆ.
- ಒಟ್ಟು 268 ಎಂ.ಎಲ್.ಡಿ. ಸಂಸ್ಕರಣಾ ಸಾಮರ್ಥ್ಯದ 07 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಉನ್ನತೀಕರಣ.
- ಬಿ.ಬಿ.ಎಂ.ಪಿ ವ್ಯಾಪ್ತಿಗೆ ಸೇರ್ಪಡೆಯಾದ 110 ಗ್ರಾಮಗಳಿಗೆ ಎರಡನೇ ಹಂತದ ಕುಡಿಯುವ ನೀರಿನ ಯೋಜನೆ ಪ್ರಾರಂಭ.

BANGALORE IAS Academy

**ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ 2.0:** 10 ಮಹಾನಗರ ಪಾಲಿಕೆಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಯೋಜನೆ ಜಾರಿ.

- **ಇಂಟಿಗ್ರೇಟೆಡ್ ಟೌನ್‌ಶಿಪ್ ಅಭಿವೃದ್ಧಿ**: ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಕಲಬುರಗಿ, ತುಮಕೂರಿನ ವಸಂತನರಸಾಪುರ, ಕೆಜಿಎಫ್ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಅಭಿವೃದ್ಧಿಪಡಿಸಲಾಗುವುದು .
- ಬೆಂಗಳೂರಿನ ಹೊರವಲಯದಲ್ಲಿರುವ ದೇವನಹಳ್ಳಿ, ನೆಲಮಂಗಲ, ಹೊಸಕೋಟೆ, ದೊಡ್ಡಬಳ್ಳಾಪುರ, ಮಾಗಡಿ ಮತ್ತು ಬಿಡದಿಯಲ್ಲಿ ರಸ್ತೆ ಮತ್ತು ರೈಲು ಸಂಪರ್ಕದೊಂದಿಗೆ ಟೌನ್ ಶಿಫಗಳ (Satellite Towns) ಅಭಿವೃದ್ಧಿ.
- **ಅಮೃತ್ 2.0** ಕೇಂದ್ರ ಪುರಸ್ಕೃತ ಯೋಜನೆಯಡಿ 200 ಕೋಟಿ ರೂ. ಒದಗಿಸಿ, 7.5 ಲಕ್ಷ ಮನೆಗಳಿಗೆ ನಲ್ಲಿ ಸಂಪರ್ಕದ ಮೂಲಕ ಕುಡಿಯುವ ನೀರು ಒದಗಿಸುವ ಗುರಿ. ಅಮೃತ್ 2.0 ಅಡಿಯಲ್ಲಿ ಕೆರೆ ಹಾಗೂ ಜಲಮೂಲಗಳ ಪುನಶ್ಚೇತನ ಮತ್ತು ಉದ್ಯಾನವನಗಳ ಅಭಿವೃದ್ಧಿಗೆ ಕ್ರಮ.
- ಕೇಂದ್ರ ಪುರಸ್ಕೃತ ಸ್ವಚ್ಛ ಭಾರತ್ ಮಿಷನ್ 2.0 ಅಡಿಯಲ್ಲಿ ದ್ರವ ತ್ಯಾಜ್ಯಗಳ ಸಂಸ್ಕರಣೆ, ಲೆಗೆಸಿ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿಗೆ ಆದ್ಯತೆ
- ಒಂದು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಸ್ಥಳೀಯ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳಾಗಿ ಉನ್ನತೀಕರಣ.

**ಇಂಧನ**

- ಗೃಹ ಜ್ಯೋತಿ ಯೋಜನೆಯಡಿ 1.65 ಕೋಟಿ ಗ್ರಾಹಕರ ನೋಂದಣಿ.
- ಕೆಪಿಸಿಎಲ್ ವತಿಯಿಂದ ತೇಲುವ (Floating) ಸೌರ ಹಾಗೂ ಭೂಸ್ಥಾಪಿತ (Ground mounted) ಸೌರ ಯೋಜನೆಗಳ ಅನುಷ್ಠಾನಕ್ಕೆ ಕ್ರಮ.
- ಕೃಷಿ ಪಂಪ್ ಸೆಟ್ ಫೀಡರ್ ಸೌರೀಕರಣ ಯೋಜನೆ ಹಂತ-II ಅಡಿಯಲ್ಲಿ 1,192 ಮೆಗಾ ವ್ಯಾಟ್ ಸೌರ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ 4.30 ಲಕ್ಷ ಐ.ಪಿ. ಸೆಟ್‌ಗಳನ್ನು ಸೌರೀಕರಣಗೊಳಿಸಲು ಕ್ರಮ.
- ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ 2,500 EV Charging ಕೇಂದ್ರಗಳು ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ಮೂಲಕ 35 ಕೋಟಿ ರೂ. ವೆಚ್ಚದಲ್ಲಿ 100 ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ.

**ಲೋಕೋಪಯೋಗಿ**

- ಪ್ರಸಕ್ತ ಸಾಲಿನಲ್ಲಿ ಕೆಶಿಪ್-4 ಯೋಜನೆಯಡಿ ಬಾಹ್ಯ ಹಣಕಾಸು ಸಂಸ್ಥೆಯ ನೆರವಿನೊಂದಿಗೆ 875 ಕಿ.ಮೀ ಉದ್ದದ ರಾಜ್ಯ ಹೆದ್ದಾರಿ ಅಭಿವೃದ್ಧಿ.

BANGALORE IAS Academy

- 1,300 ಕಿ.ಮೀ. ಉದ್ದದ ಪ್ರಮುಖ ರಸ್ತೆಗಳ ಅಭಿವೃದ್ಧಿಗೆ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ (SHDP) ಹಂತ-5 ಪ್ರಾರಂಭ.
- ಬೆಳಗಾವಿ ನಗರ ಪರಿಮಿತಿಯಲ್ಲಿ 450 ಕೋಟಿ ರೂ. ವೆಚ್ಚದಲ್ಲಿ 4.50 ಕಿ.ಮೀ. ಉದ್ದದ ಮೇಲ್ಸೇತುವೆ (Elevated Corridor) ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು
- ಮಂಗಳೂರು ಬಂದರಿನಿಂದ ಬೆಂಗಳೂರುವರೆಗೆ ಹಾಗೂ ಬೀದರ್‌ನಿಂದ ಬೆಂಗಳೂರು ನಡುವೆ ಆರ್ಥಿಕ ಅಭಿವೃದ್ಧಿ ಕಾರಿಡಾರ್ ನಿರ್ಮಾಣಕ್ಕೆ ಕ್ರಮ.

**ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ**

ಮೂಲಸೌಕರ್ಯ ಯೋಜನೆಗಳ ಪ್ರಗತಿ ಮೇಲ್ವಿಚಾರಣೆಗೆ ಹಾಗೂ ತೊಡಕುಗಳ ನಿವಾರಣೆಗೆ ಮುಖ್ಯಮಂತ್ರಿಗಳ ಕಛೇರಿಯಲ್ಲಿ ಪ್ರತ್ಯೇಕ ಘಟಕ ಸ್ಥಾಪನೆ.

**ಕರಾವಳಿ ತೀರ ಪ್ರದೇಶ ಹಾಗೂ ಬಂದರುಗಳ ಅಭಿವೃದ್ಧಿಗೆ ಪ್ರಸ್ತಾಪಿಸಿದ ಯೋಜನೆಗಳು:**

  - ಉತ್ತರ ಕನ್ನಡ ಜಿಲ್ಲೆಯ ಕೇಣಿಯಲ್ಲಿ ಹೊಸ ಆಳಸಮುದ್ರ ಸರ್ವಋತು ಬಂದರು, ಪಾವಿನಕುರ್ವೆಯಲ್ಲಿ ppp ಮಾದರಿಯಲ್ಲಿ ಎರಡನೇ ಬೃಹತ್ ಬಂದರಿನ ಅಭಿವೃದ್ಧಿಗೆ ಕ್ರಮ.
  - ಕಾರವಾರ, ಮಲ್ಪೆ ಮತ್ತು ಹಳೇ ಮಂಗಳೂರು ಬಂದರುಗಳಲ್ಲಿ ನಾಲ್ಕು ಬರ್ತ್‌ಗಳ ಅಭಿವೃದ್ಧಿ
  - ಹಳೇ ಮಂಗಳೂರು ಬಂದರಿನಲ್ಲಿ 350 ಮೀ. ಉದ್ದದ ಕೋಸ್ಟಲ್ ಬರ್ತ್ ನಿರ್ಮಾಣ
- ಮೈಸೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ; ವಿಜಯಪುರ ಹಾಗೂ ಹಾಸನ ವಿಮಾನ ನಿಲ್ದಾಣ ಕಾಮಗಾರಿ ಪೂರ್ಣಗೊಳಿಸಲು, ರಾಯಚೂರು ಹಾಗೂ ಕಾರವಾರ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಕ್ರಮ.
- ಸರ್ಕಾರದ ಆಸ್ತಿ ನಗದೀಕರಣದ ಅವಕಾಶಗಳನ್ನು ಗುರುತಿಸಲು ಹಾಗೂ ಈ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ವಿಧಾನವನ್ನು ರೂಪಿಸಲು ತಜ್ಞರ ಸಮಿತಿ ರಚನೆ.

**ವಾಣಿಜ್ಯ ಮತ್ತು ಕೈಗಾರಿಕೆ**

- ಬೆಂಗಳೂರು ಸಮೀಪ ಸುಮಾರು 2000 ಎಕರೆ ಪ್ರದೇಶದಲ್ಲಿ Knowledge Health Care, Innovation and Research City (KHIR) ಅನ್ನು ಅಭಿವೃದ್ಧಿಗೆ ಕ್ರಮ.
- ಎಂ.ಎಸ್.ಐ.ಎಲ್. ಚಿಟ್‌ಫಂಡ್ ಅನ್ನು ಗ್ರಾಮಾಂತರ ಪ್ರದೇಶಗಳಿಗೆ ವಿಸ್ತರಿಸಲಾಗುವುದು.
- ವಿವಿಧ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಕೈಗಾರಿಕಾ ವಸಾಹತುಗಳು ಮೇಲ್ದರ್ಜೆಗೆ.
- ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಸ್ಟಾಕ್ ಎಕ್ಸ್‌ಚೇಂಜ್‌ನಲ್ಲಿ ಐಪಿಓ ಬಿಡುಗಡೆ ಮಾಡಲು ಸಹಾಯಧನ ಸೌಲಭ್ಯ
- ಸರ್ಕಾರಿ ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು ಮತ್ತು ಎಂ.ಎಸ್.ಎಂ.ಇ.ಗಳನ್ನು TReDS ವೇದಿಕೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಎಂ.ಎಸ್.ಎಂ.ಇ. ಗಳಿಗೆ ಕಾಲಮಿತಿಯೊಳಗೆ ಪಾವತಿಗಳು ಬರಲು ಅನುಕೂಲ.

BANGALORE IAS Academy

- ಮಂಡ್ಯದ ಮೈಶುಗರ್ ಕಾರ್ಖಾನೆಯ ಆವರಣದಲ್ಲಿ ಹೊಸ ಸಕ್ಕರೆ ಕಾರ್ಖಾನೆ ನಿರ್ಮಾಣ.
- ರಾಜ್ಯದಲ್ಲಿ 2024-29ರ ಅವಧಿಗೆ 10,000 ಕೋಟಿ ರೂ.ಗಳ ಬಂಡವಾಳ ಹೂಡಿಕೆ ಹಾಗೂ 2 ಲಕ್ಷ ಉದ್ಯೋಗಗಳ ಸೃಜನೆಯ ಗುರಿಯೊಂದಿಗೆ ಹೊಸ ಜವಳಿ ನೀತಿ ಜಾರಿಗೆ ಕ್ರಮ.
- ಕಿತ್ತೂರು ಕರ್ನಾಟಕ, ಕಲ್ಯಾಣ ಕರ್ನಾಟಕ ಮತ್ತು ಮೈಸೂರು ವಿಭಾಗಗಳಲ್ಲಿ ನೂತನ ಜವಳಿ ಪಾರ್ಕ್‌ಗಳ ಪ್ರಾರಂಭ
- ಬಳ್ಳಾರಿಯಲ್ಲಿ ಜೀನ್ಸ್ ಅಪಾರೆಲ್ ಪಾರ್ಕ್ ಹಾಗೂ ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಅಭಿವೃದ್ಧಿಗೆ ಕ್ರಮ.
- ರಾಜ್ಯದ 25 ಜಿಲ್ಲೆಗಳಲ್ಲಿ ಮಿನಿ ಜವಳಿ ಪಾರ್ಕ್ ಸ್ಥಾಪನೆ.
- ನಂಜನಗೂಡು ತಾಲ್ಲೂಕಿನ ಬದನವಾಳು ಗ್ರಾಮದಲ್ಲಿ ಖಾದಿ ಚಟುವಟಿಕೆ ಪ್ರೋತ್ಸಾಹಕ್ಕೆ ಕ್ರಮ

**ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತುತಂತ್ರಜ್ಞಾನ**

- ಸ್ಟಾರ್ಟಪ್ ವಲಯದಲ್ಲಿ ಕರ್ನಾಟಕದ ಮುಂಚೂಣಿಯನ್ನು ಕಾಯ್ದುಕೊಳ್ಳಲು ಜ್ಞಾನಾಧಾರಿತ ಮತ್ತು ತಂತ್ರಜ್ಞಾನ ಚಾಲಿತ ಪರಿಕಲ್ಪನೆಗಳು ಮತ್ತು ನಾವೀನ್ಯತೆಗಳನ್ನು ಪೋಷಿಸುವ **ರಾಜೀವ್ ಗಾಂಧಿ ವಾಣಿಜ್ಯೋದ್ಯಮ ಕಾರ್ಯಕ್ರಮ** ಜಾರಿ.
- ಮಹಿಳಾ ಉದ್ಯಮಿಗಳನ್ನು ಬೆಂಬಲಿಸಲು ಮಹಿಳಾ ಉತ್ಕೃಷ್ಟತೆ ಮತ್ತು ಉದ್ಯಮಶೀಲತೆಯಲ್ಲಿ ಬೆಂಬಲ ಕಾರ್ಯಕ್ರಮ
- ಸಿ-ಕ್ಯಾಂಪ್‌ನ ಅಗ್ರಿ ಇನ್ನೋವೇಶನ್ ಪಾರ್ಕ್‌ಗೆ 5 ಎಕರೆ ಭೂಮಿ ಮೀಸಲು.
- ಫಿನ್‌ಟೆಕ್, ಸ್ಪೇಸ್‌ಟೆಕ್ ಮತ್ತು ಆಟೋಮೋಟಿವ್ ಟೆಕ್‌ನಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪನೆ.
- 2024-25ನೇ ಸಾಲಿನಲ್ಲಿ ಹೊಸ ಜಿ.ಸಿ.ಸಿ. ನೀತಿ ಜಾರಿಗೆ ಕ್ರಮ.
- ಕಲಬುರಗಿ, ಶಿವಮೊಗ್ಗ, ಹುಬ್ಬಳ್ಳಿ ಮತ್ತು ತುಮಕೂರಿನಲ್ಲಿ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಕೌಶಲ್ಯ ಮತ್ತು ನಾವೀನ್ಯತಾ ಕೇಂದ್ರ ಸ್ಥಾಪನೆ.
- ಆರೋಗ್ಯ, ಕೃಷಿ ಮತ್ತು ಜೀವ ವಿಜ್ಞಾನದ ಇತರ ಕ್ಷೇತ್ರಗಳಲ್ಲಿ ಅತ್ಯಾಧುನಿಕ ಸಂಶೋಧನೆಗೆ ಉತ್ತೇಜನ ನೀಡಲು ರಾಜ್ಯದಲ್ಲಿ ಸುಧಾರಿತ **ಜಿನೋಮ್ ಎಡಿಟಿಂಗ್ ಮತ್ತು ಜೀನ್ ಥೆರಪಿ ಕೇಂದ್ರ ಸ್ಥಾಪನೆ.**
- ರಾಜ್ಯದಲ್ಲಿ AVGC XR ವಲಯದಲ್ಲಿ 30,000 ಹೊಸ ಉದ್ಯೋಗ ಸೃಜನೆಯ ಗುರಿಯೊಂದಿಗೆ **AVGC-XR 3.0 ನೀತಿ ಜಾರಿಗೆ ಕ್ರಮ.**
- ಕ್ರೈಸ್ ವ್ಯಾಪ್ತಿಯ 833 ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ 3 ಕೋಟಿ ರೂ. ವೆಚ್ಚದಲ್ಲಿ ತಲಾ ಒಂದು ದೂರದರ್ಶಕ ಒದಗಿಸಲು ಕ್ರಮ.
- **ಬೆಂಗಳೂರಿನಲ್ಲಿ ವಿಜ್ಞಾನ ನಗರವನ್ನು ಸ್ಥಾಪಿಸಲಾಗುವುದು**

**ಕನ್ನಡ ಮತ್ತು ಸಂಸ್ಕೃತಿ**

BANGALORE IAS Academy

- ಶರಣರ ಚಿಂತನೆ, ಸಾಹಿತ್ಯ ಕುರಿತು ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಬಸವ ಜಯಂತಿಯಂದು ಸರ್ವಧರ್ಮ ಸಂಸತ್ತು ಕಾರ್ಯಕ್ರಮಗಳ ಮೂಲಕ ಬಸವಾದಿ ಶರಣರ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜನೆ.
- ಬಸವಣ್ಣನವರ ಜನ್ಮಸ್ಥಳ ಅಭಿವೃದ್ಧಿಗೆ **ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ರಚನೆ.**
- ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮದಡಿ ಎಲ್ಲಾ ಕಛೇರಿಗಳು, ಅಂಗಡಿ-ಮುಂಗಟ್ಟುಗಳು, ವಿವಿಧ ವಾಣಿಜ್ಯೋದ್ಯಮ ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡವನ್ನು ಕಡ್ಡಾಯವಾಗಿ ಅಳವಡಿಸಲು ಕ್ರಮ.
- **ಸಂತ ಕವಿ ಕನಕದಾಸ ಅಧ್ಯಯನ ಕೇಂದ್ರದ** ಮೂಲಕ ತತ್ವಪದ, ಕೀರ್ತನ ಸಾಹಿತ್ಯ ಮತ್ತು ಭಕ್ತಿ ಚಳವಳಿ ಸೇರಿದಂತೆ ಸಾಹಿತ್ಯ ಸಮೀಕ್ಷೆ, ಸಂಗ್ರಹಣೆ, ಪ್ರಕಟಣೆ ಮತ್ತು ಪ್ರಸಾರ ಕಾರ್ಯ ಕೈಗೊಳ್ಳಲು ಒಂದು ಕೋಟಿ ರೂ. ಅನುದಾನ.
- ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶಿವಯೋಗಿ ಸಿದ್ಧರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳ ಸ್ಥಾಪನೆ.
- ಹಿರೇಕೆರೂರು ತಾಲ್ಲೂಕಿನಲ್ಲಿ ವಚನಕಾರ **ಸರ್ವಜ್ಞನ ಸ್ಮಾರಕ ನಿರ್ಮಾಣ.**

**ಯುವ ಸಬಲೀಕರಣ ಮತ್ತು ಕ್ರೀಡೆ**

**ಕ್ರೀಡಾಪಟುಗಳಿಗೆ ವಿವಿಧ ಇಲಾಖೆಗಳ ನೇಮಕಾತಿಯಲ್ಲಿ ಶೇ. 2 ರಷ್ಟು ಹುದ್ದೆ ಮೀಸಲು.**

- ಬೆಂಗಳೂರಿನ ಉತ್ತರ ತಾಲ್ಲೂಕಿನಲ್ಲಿ 70 ಎಕರೆ ಪ್ರದೇಶದಲ್ಲಿ ಸಾರ್ವಜನಿಕ- ಖಾಸಗಿ ಸಹಭಾಗಿತ್ವದಲ್ಲಿ ಕ್ರೀಡಾ ನಗರ (Sports City) ಸ್ಥಾಪನೆ ಹಾಗೂ ನಾಲ್ಕು ಅತ್ಯಾಧುನಿಕ ಕ್ರೀಡ ಸಂಕೀರ್ಣಗಳ ನಿರ್ಮಾಣ.
- ಮುಂಬರುವ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗಳಿಸುವ ಕ್ರೀಡಾಪಟುಗಳಿಗೆ 06 ಕೋಟಿ ರೂ., ಬೆಳ್ಳಿ ಪದಕ ಪಡೆಯುವ ಕ್ರೀಡಾಪಟುಗಳಿಗೆ 04 ಕೋಟಿ ರೂ. ಹಾಗೂ ಕಂಚಿನ ಪದಕ ಪಡೆಯುವ ಕ್ರೀಡಾಪಟುಗಳಿಗೆ 03 ಕೋಟಿ ರೂ. ಪ್ರೋತ್ಸಾಹಧನ ಘೋಷಣೆ.
- ಏಷಿಯನ್ ಮತ್ತು ಕಾಮನ್‌ವೆಲ್ತ್ ಕ್ರೀಡಾಕೂಟಗಳಲ್ಲಿ ಚಿನ್ನದ ಪದಕ ವಿಜೇತ ಕ್ರೀಡಾಪಟುಗಳಿಗೆ 35 ಲಕ್ಷ ರೂ., ಬೆಳ್ಳಿ ಪದಕ ವಿಜೇತ ಕ್ರೀಡಾಪಟುಗಳಿಗೆ 25 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತ ಕ್ರೀಡಾಪಟುಗಳಿಗೆ 15 ಲಕ್ಷ ರೂ. ಪ್ರೋತ್ಸಾಹಧನ ನೀಡಲು ಕ್ರಮ.
- ರಾಜ್ಯದ 14 ಸ್ಥಳಗಳಲ್ಲಿ ಮುಂದಿನ ಎರಡು ವರ್ಷದೊಳಗೆ 35 ಕೋಟಿ ರೂ. ವೆಚ್ಚದಲ್ಲಿ ಮಹಿಳಾ ಕ್ರೀಡಾ ವಸತಿ ನಿಲಯ, ಕೊಡಗು ಜಿಲ್ಲೆಯ ಪೊನ್ನಂಪೇಟೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾ ವಸತಿ ನಿಲಯ ಕಟ್ಟಡ ನಿರ್ಮಾಣ ಹಾಗೂ 10 ಕೋಟಿ ರೂ. ವೆಚ್ಚದಲ್ಲಿ ಬಳ್ಳಾರಿಯಲ್ಲಿ ಕ್ರೀಡಾ ವಸತಿ ನಿಲಯದ ಉನ್ನತೀಕರಣ ಹಾಗೂ ಕ್ರೀಡಾ ಸೌಕರ್ಯಗಳ ಅಭಿವೃದ್ಧಿಗೆ ಕ್ರಮ.

BANGALORE IAS Academy

**ಪ್ರವಾಸೋದ್ಯಮ**

- ರಾಜ್ಯದಲ್ಲಿ ಪರಿಷ್ಕೃತ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೆ ತರಲು ಕ್ರಮ.
- ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರವಾಸಿ ಸೌಲಭ್ಯ ಅಭಿವೃದ್ಧಿಪಡಿಸಲು 100 ಕೋಟಿ ರೂ. ಅನುದಾನ.
- **ಕಲಬುರಗಿಯಲ್ಲಿ ವಚನ ಮಂಟಪ ಸ್ಥಾಪನೆಗೆ ಕ್ರಮ.**
- ಬೀದರ್ ಹಾಗೂ ವಿಜಯಪುರದಲ್ಲಿ ಕರೇಜ್ ಎಂದು ಪ್ರಸಿದ್ಧವಾಗಿರುವ ಪುರಾತನ ನೀರು ಸರಬರಾಜು ವ್ಯವಸ್ಥೆಯ ಪುನಶ್ಚೇತನಕ್ಕೆ ನೆರವು.
- ಬಂಡೀಪುರ, ದಾಂಡೇಲಿ ಮತ್ತು ಕಬಿನಿಯಲ್ಲಿ ಇಂಟರ್‌ಪ್ರಿಟೇಷನ್ ಸೆಂಟರ್ ನಿರ್ಮಾಣ.

**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ**

- ಮಾನವ- ವನ್ಯಜೀವಿ ಸಂಘರ್ಷ ತಡೆಯಲು ಪ್ರಸಕ್ತ ವರ್ಷ ಬಂಡೀಪುರದಲ್ಲಿ ಒಂದು ಹೊಸ ಕಾರ್ಯಪಡೆ ರಚನೆಗೆ ಕ್ರಮ. ಕಾರ್ಯಪಡೆಗಳನ್ನು ಬಲಪಡಿಸಲು 10 ಕೋಟಿ ರೂ. ಹಂಚಿಕೆ; ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಆದ್ಯತೆ.
- ಬೀದರ್ ಜಿಲ್ಲೆಯ ಹೊನ್ನಿಕೇರಿ ಮೀಸಲು ಅರಣ್ಯ ಮತ್ತು ಇತರೆ ಜೀವವೈವಿಧ್ಯ ಪ್ರದೇಶಗಳಲ್ಲಿ ಪರಿಸರ ಪ್ರವಾಸೋದ್ಯಮ ಮತ್ತು ಸಂರಕ್ಷಣಾತ್ಮಕ ಕಾರ್ಯಕ್ರಮಗಳಿಗೆ ಅನುದಾನ.
- ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಲ, ವಾಯು ಹಾಗೂ ಪರಿಸರ ಸಂರಕ್ಷಣಾ ಕಾಯ್ದೆಗಳನ್ವಯ ನೀಡುವ ಸಮ್ಮತಿ ಪತ್ರಗಳನ್ನು ಒಗ್ಗೂಡಿಸಿ ಸರಳೀಕರಣಗೊಳಿಸಲು ಕ್ರಮ. ಮಂಡಳಿಯಿಂದ ವಿವಿಧ ಅನುಮತಿಗಳು ಮತ್ತು ಪ್ರಮಾಣ ಪತ್ರಗಳನ್ನು ನೀಡಲು ಏಕಗವಾಕ್ಷಿ ಕಾರ್ಯವಿಧಾನವನ್ನು ಸೃಜಿಸಲು ಕ್ರಮ.
- 17 ನದಿ ನೀರಿನ ಗುಣಮಟ್ಟ ಮಾಪನ ಕೇಂದ್ರಗಳು ಹಾಗೂ ಎರಡು ಪರಿಸರ ಪ್ರಯೋಗಾಲಯಗಳ ಸ್ಥಾಪನೆ ಹಾಗೂ 9 ಪರಿಸರ ಪ್ರಯೋಗಾಲಯ ಉನ್ನತೀಕರಣ.

**ಕಂದಾಯ**

ಭೂ ಸುರಕ್ಷಾ ಯೋಜನೆಯನ್ನು ಪ್ರಾಯೋಗಿಕವಾಗಿ ಜಾರಿಗೊಳಿಸಿ, ಕಂದಾಯ ಇಲಾಖೆಯ ಭೂಮಿ, ಸರ್ವೆ ಮತ್ತು ನೋಂದಣಿ ದಾಖಲೆಗಳನ್ನು ಗಣಕೀಕರಣಗೊಳಿಸಿ, ಶಿಥಿಲಾವಸ್ಥೆಯಲ್ಲಿರುವ ದಾಖಲೆಗಳನ್ನು ಶಾಶ್ವತವಾಗಿ ಉಳಿಸಿ. ಆನ್‌ಲೈನ್‌ನಲ್ಲಿ ದಾಖಲೆ ಒದಗಿಸಲು ಕ್ರಮ.

ಆಕಾರ್‌ಬಂದ್‌ಗಳ ಗಣಕೀಕರಣ, ಪೋಡಿ ಅಭಿಯಾನ 2.0, ಡ್ರೋನ್ ಸರ್ವೇ ಮಾಡಿಸಿ ಆಸ್ತಿ ಮತ್ತು ಹಕ್ಕು ದಾಖಲಾತಿಗಳನ್ನು ಭೂಮಾಲೀಕರಿಗೆ ವಿತರಿಸುವುದು, ನೋಟೀಸುರಹಿತ ಮ್ಯುಟೇಷನ್ ಗಳು ನಿಗದಿತ ತಂತ್ರಾಂಶದಲ್ಲಿ ಸ್ವಯಂಚಾಲಿತವಾಗಿ ಅನುಮೋದನೆಯಾಗಲು ಕಾನೂನು ತಿದ್ದುಪಡಿ ಸೇರಿದಂತೆ ವಿವಿಧ

BANGALORE IAS Academy

ಉಪಕ್ರಮಗಳ ಜೊತೆಗೆ ಡಿಜಿ ಕಂದಾಯ ಯೋಜನೆಯಡಿ ಕಂದಾಯ ಇಲಾಖೆಯು ನೀಡುವ ಎಲ್ಲಾ ಸೇವೆಗಳನ್ನು ಡಿಜಿಟಲ್ ಪ್ಲಾಟ್‌ಫಾರ್ಮ್ ಮೂಲಕ ಸಾರ್ವಜನಿಕರಿಗೆ ಒದಗಿಸಲು ಕ್ರಮ.

ನಿಖರ ಡಿಜಿಟಲ್ ದಾಖಲೆಗಳನ್ನು ಸಾರ್ವಜನಿಕರಿಗೆ ಒದಗಿಸಲು ಭೂಮಾಪನ ಕಛೇರಿಗಳಿಗೆ ಡ್ರೋನ್ ಮತ್ತಿತರ ಉಪಕರಣ ಒದಗಿಸಲು ಕ್ರಮ.

ಹೊಸ ಕಂದಾಯ ಗ್ರಾಮ ಹಾಗೂ ಉಪಗ್ರಾಮಗಳಾಗಿ ಘೋಷಣೆಯಾದ ಸರ್ಕಾರವು ದಾಖಲೆ ರಹಿತ ಜನವಸತಿ ಪ್ರದೇಶಗಳ 2 ಲಕ್ಷ ನಿವಾಸಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲು ಕ್ರಮ. ಸುಮಾರು

ಕಂದಾಯ ದಾಖಲೆಗಳ ಪಾರದರ್ಶಕ ಹಾಗೂ ಆನ್‌ಲೈನ್ ವ್ಯವಸ್ಥೆ ಮೂಲಕ ಸಾರ್ವಜನಿಕರಿಗೆ ಲಭ್ಯತೆಗೆ ಭೂ ಮಾಪನ ಇಲಾಖೆಗೆ ಸೇರಿದ 240 ಅಭಿಲೇಖಾಲಯ ಕೊಠಡಿಗಳ ಆಧುನೀಕರಣ..

ವಿಜಯಪುರ ಮತ್ತು ಬೀದರ್ ಜಿಲ್ಲೆಗಳಲ್ಲಿ ಹೊಸ ಜಿಲ್ಲಾಡಳಿತ ಕಛೇರಿ ಹಾಗೂ ಅಗತ್ಯವಿರುವ ತಾಲ್ಲೂಕುಗಳಲ್ಲಿ ತಾಲ್ಲೂಕಾ ಆಡಳಿತ ಕಛೇರಿ ನಿರ್ಮಾಣ.

ರಾಜ್ಯ ವಿಪತ್ತು ಉಪಶಮನ ನಿಧಿಯಿಂದ ವಿವಿಧ ಬರ ಉಪಶಮನ ಕ್ರಮಗಳನ್ನು ತೆಗೆದುಕೊಳ್ಳಲು ಕ್ರಮ

10 ಕೋಟಿ ರೂ. ವೆಚ್ಚದಲ್ಲಿ ಶಾಲಾ ಮಕ್ಕಳಿಗೆ ಹವಾಮಾನ ಬದಲಾವಣೆ ಅನುಭವ ಕೇಂದ್ರ ಪ್ರಾರಂಭ.

ನೋಂದಣಿ ಪ್ರಕ್ರಿಯೆಯಲ್ಲಿ ಪ್ರಸ್ತಾಪಿಸಲಾದ ನಾಗರಿಕ ಸ್ನೇಹಿ ಸುಧಾರಣೆಗಳು: ಎರಡೂ ಪಕ್ಷಗಳ ಉಪಸ್ಥಿತಿಯಿಲ್ಲದೆ ಇ-ನೋಂದಣಿ, Anytime Anywhere Registration FI a ವಿಸ್ತರಿಸಲಾಗುವುದು. ಸ್ಥಿರಾಸ್ತಿ ನೋಂದಣಿಗೆ ಸಂಬಂಧಿಸಿದ ಎಲ್ಲಾ ತಂತ್ರಾಂಶಗಳ ಏಕೀಕರಣ.

NAMMAKPSC ACADEMY HEBBAL | VIJAYANAGAR Est: 2014 BREAKING BARRIERS TO GREATNESS

## ಧಾರ್ಮಿಕ ದತ್ತಿ

- ವಾರಾಣಸಿಯಲ್ಲಿ ವಸತಿ ಸಂಕೀರ್ಣ ನಿರ್ಮಾಣ.
- ಮಂತ್ರಾಲಯಕ್ಕೆ ಸಂಪರ್ಕ ಕಲ್ಪಿಸಲು ರಾಯಚೂರಿನ ಚಿಕ್ಕಮಂಚಾಲಿ ಗ್ರಾಮದ ಬಳಿ ಬ್ರಿಡ್ಜ್-ಕಂ-ಬ್ಯಾರೇಜ್ ನಿರ್ಮಾಣ.
- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶ್ರೀ ಘಾಟಿ ಸುಬ್ರಹ್ಮಣ್ಯಸ್ವಾಮಿ ದೇವಾಲಯ ಹಾಗೂ ಕೊಪ್ಪಳ ಜಿಲ್ಲೆಯ ಹುಲಿಗೆಮ್ಮ ದೇವಾಲಯ ಅಭಿವೃದ್ಧಿಗೆ ಪ್ರತ್ಯೇಕ ಪ್ರಾಧಿಕಾರ ರಚನೆ.
- ಯಾವುದೇ ಆದಾಯವಿಲ್ಲದ 34,165 'ಸಿ' ವರ್ಗದ ಐತಿಹಾಸಿಕ ದೇವಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ Vision Group.
- 29,523 'ಸಿ' ವರ್ಗದ ದೇವಾಲಯಗಳ ಅರ್ಚಕರ ಬ್ಯಾಂಕ್ ಖಾತೆಗೆ ತಸ್ತಿಕ್ ಮೊತ್ತ ಜಮೆ ಮಾಡಲು ಕ್ರಮ.

**ಇ-ಆಡಳಿತ**

BANGALORE IAS Academy

- ಫಲಾನುಭವಿಗಳಿಗೆ ನೀಡುತ್ತಿರುವ ನಗದುರಹಿತ ಪ್ರಯೋಜನಗಳನ್ನೂ ಸಹ ಹಂತ ಹಂತವಾಗಿ ರಾಜ್ಯ ಡಿ.ಬಿ.ಟಿ. ವೇದಿಕೆಯ ಅಡಿಯಲ್ಲಿ ತರಲು ಕ್ರಮ.
- ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ವೇದಿಕೆ 2.0 ರಲ್ಲಿ ಎಲ್ಲಾ ಇಲಾಖೆಗಳಿಗೆ ಗುತ್ತಿಗೆ ನಿರ್ವಹಣಾ ಮಾಡ್ಯುಲ್ (Contract Management Module) ವಿಸ್ತರಣೆ.
- ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾವಾರಿಧಿ ಎಂಬ ಸಮಗ್ರ ದತ್ತ-ಸಂಚಯ ನಿರ್ಮಿಸಲು ಕ್ರಮ.
- ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒಳಗೊಂಡ ಆರ್ಟಿಫಿಶಿಯಲ್ ಇಂಟಲಿಜೆನ್ಸ್ / ಮಿಷನ್ ಲರ್ನಿಂಗ್ ಆಡಳಿತ ಘಟಕ ಸ್ಥಾಪನೆಗೆ ಕ್ರಮ.
- ಸೈಬರ್ ದಾಳಿಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಪ್ರಸ್ತುತ ಇರುವ Security Operation Center ಉನ್ನತೀಕರಣ.
- ಸಕಾಲದಲ್ಲಿ ಸೇವಾ ಸಿಂಧು ಪೋರ್ಟಲ್‌ಗೆ ಸೇರ್ಪಡೆಗೊಳ್ಳಲು ಬಾಕಿ ಇರುವ 429 ಸೇವೆಗಳನ್ನು ಸೇವಾ ಸಿಂಧು ಅಡಿ ಸೇರ್ಪಡೆಗೆ ಕ್ರಮ.
- **ಕನ್ನಡ ಕಸ್ತೂರಿ ಎಂಬ ಯಂತ್ರಾನುವಾದ ತಂತ್ರಾಂಶದ ಅಭಿವೃದ್ಧಿಗೆ ಕ್ರಮ.**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ**

- ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924 ರಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅಂಗವಾಗಿ ವಿಶೇಷ ಕಾರ್ಯಕ್ರಮ ಆಯೋಜನೆ
- ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಸೌಲಭ್ಯ
- ಸಾಮಾಜಿಕ ನ್ಯಾಯದ ಕ್ಷೇತ್ರಕ್ಕೆ ಕೊಡುಗೆ ನೀಡಿರುವ ಪತ್ರಕರ್ತರಿಗೆ 'ವಡ್ಡರ್ಸೆ ರಘುರಾಮ ಶೆಟ್ಟಿ ಪ್ರಶಸ್ತಿ" ಸ್ಥಾಪನೆ.

**ಒಳಾಡಳಿತ**

- ಸುಳ್ಳುಸುದ್ದಿ ಹರಡುವುದನ್ನು ತಡೆಗಟ್ಟಲು ITBT ಇಲಾಖೆಯ ಸಹಯೋಗದಲ್ಲಿ ಸತ್ಯ ತಪಾಸಣಾ ತಂಡ ಹಾಗೂ ವಿಶೇಷ ಕೋಶ ರಚನೆ.
- ರಾಜ್ಯದಲ್ಲಿ ಸೈಬರ್ ಕ್ರೈಂ ವಿಭಾಗವನ್ನು ಬಲಪಡಿಸಲು ಒಟ್ಟು 43 ಸಿ.ಇ.ಎನ್. (Cyber, Economic and Narcotics) ಉನ್ನತೀಕರಣ.
- ಕಟ್ಟಡ ರಹಿತ ಠಾಣೆ ಮತ್ತು ಪೊಲೀಸ್ ಕಛೇರಿಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣ.
- ವಿಧಿ ವಿಜ್ಞಾನ ಪ್ರಯೋಗಾಲಯಗಳ (Forensic Science Lab) ಬಲವರ್ಧನೆ.

BANGALORE IAS Academy

- ರಾಜ್ಯದ ಎಲ್ಲಾ ಕಾರಾಗೃಹಗಳ ಸುಗಮ ಆಡಳಿತ ಮತ್ತು ಭದ್ರತೆಗಾಗಿ 5 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಉಪಕರಣ ಖರೀದಿ.
- ಶಿವಮೊಗ್ಗ ಜಿಲ್ಲೆಯಲ್ಲಿ ಹೊಸ ಹೈ-ಸೆಕ್ಯೂರಿಟಿ ಕಾರಾಗೃಹ ನಿರ್ಮಾಣ
- ಅಗ್ನಿಶಾಮಕ ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹೊಸ ಬಹುಮಹಡಿ ಕಟ್ಟಡಗಳ ಆಸ್ತಿ ತೆರಿಗೆಯೊಂದಿಗೆ ಶೇ.1 ರ ದರದಲ್ಲಿ **Fire Cess** ವಿಧಿಸಲು ಕ್ರಮ.
- ಬೆಂಗಳೂರಿನ ಪೊಲೀಸ್ ಸುಲಿವನ್ ಮೈದಾನದಲ್ಲಿ ಆಸ್ಟ್ರೋ ಟರ್ಫ್ ಹಾಕಿ ಅಂಕಣ ನಿರ್ಮಾಣ.

**ಸಾರಿಗೆ**

- ಆರು ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥ ಹಾಗೂ ದೇವನಹಳ್ಳಿ ಮತ್ತು ತುಮಕೂರಿನಲ್ಲಿ ಸೀಜಿಂಗ್ ಯಾರ್ಡ್ ನಿರ್ಮಾಣ.
- 32 ಸ್ಥಳಗಳಲ್ಲಿ ಅರ್ಹತಾ ಪತ್ರ ನವೀಕರಣಕ್ಕೆ ಬರುವ ಸಾರಿಗೆ ವಾಹನಗಳ ಸ್ವಯಂಚಾಲಿತ ಪರೀಕ್ಷಾ ಕೇಂದ್ರಗಳನ್ನು ಅಭಿವೃದ್ಧಿಪಡಿಸಲು ಕ್ರಮ.
- ಸಾರಿಗೆ ಇಲಾಖೆಯಲ್ಲಿ ನೋಂದಣಿಯಾಗಿರುವ ಎಲ್ಲಾ ವಾಹನಗಳ ದಾಖಲಾತಿಗಳ ಡಿಜಿಟಲೀಕರಣ, 2024-25ನೇ ಸಾಲಿನಲ್ಲಿ ಪ್ರಾಯೋಗಿಕವಾಗಿ ನಾಲ್ಕು ಕಛೇರಿಗಳಲ್ಲಿ ಜಾರಿ.

**ಕಾನೂನು**

- ರಾಜ್ಯದ ವಿವಿಧ ನ್ಯಾಯಾಲಯ ಕಟ್ಟಡಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಅನುದಾನ.
- ರಾಜ್ಯದ ಎಲ್ಲಾ ನ್ಯಾಯಾಲಯಗಳ ಕಲಾಪಗಳ ನೇರ ಪ್ರಸಾರ ಮಾಡಲು ಮತ್ತು ನ್ಯಾಯಾಲಯಗಳ ಆಡಳಿತ ವ್ಯವಸ್ಥೆಯನ್ನು ಆಧುನೀಕರಿಸಲು ಪ್ರಸಕ್ತ ಸಾಲಿನಲ್ಲಿ ಅನುದಾನ.
- ವಿರಾಜಪೇಟೆಯಲ್ಲಿ ಹೊಸ ನ್ಯಾಯಾಲಯ ಸಂಕೀರ್ಣ ನಿರ್ಮಾಣ.
- ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023 ಅನ್ನು ಜಾರಿಗೊಳಿಸಲು ಕ್ರಮ.

**ತೆರಿಗೆ ಪ್ರಸ್ತಾವನೆಗಳು**

**ವಾಣಿಜ್ಯ ತೆರಿಗೆಗಳು**

ಪ್ರಸಕ್ತ ವರ್ಷದಲ್ಲಿ ಜಿ.ಎಸ್.ಟಿ ಮೇಲ್ಮನವಿ ನ್ಯಾಯಮಂಡಳಿಯ ಎರಡು ರಾಜ್ಯ ಪೀಠಗಳ ರಚನೆ.

ಗ್ರಾಹಕ ಸಂವೇದಿ ಜಿ.ಎಸ್.ಟಿ ಡೇಟಾಬೇಸ್ ಮ್ಯಾನೇಜ್‌ಮೆಂಟ್ ಮತ್ತು ಕೃತಕ ಬುದ್ಧಿಮತ್ತೆ ಚಾಲಿತ ವಿಶ್ಲೇಷಣಾತ್ಮಕ ವ್ಯವಸ್ಥೆ ಅಭಿವೃದ್ಧಿಗೆ ಕ್ರಮ.

BANGALORE IAS Academy

2024-25 ಸಾಲಿನಲ್ಲಿ - 1,10,000 ರೂ. ಕೋಟಿಗಳ ಸಂಗ್ರಹಣೆ ಗುರಿ

**ನೋಂದಣಿ ಮತ್ತು ಮುದ್ರಾಂಕ**

- 2024-25ನೇ ಸಾಲಿಗೆ 26,000 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.
- ಮದ್ಯದ ಘೋಷಿತ ಸ್ಲಾಬ್‌ಗಳನ್ನು ತರ್ಕಬದ್ಧಗೊಳಿಸುವ ಮೂಲಕ IML ಹಾಗೂ ಬಿಯರ್‌ನ ಸ್ಲಾಬ್‌ಗಳ ಪರಿಷ್ಕರಣೆ.
- ಅಬಕಾರಿ ಇಲಾಖೆಯ ಎಲ್ಲಾ ಸೇವೆಗಳ ಡಿಜಿಟಲೀಕರಣ
- 2024-25ರ ಸಾಲಿನಲ್ಲಿ 38,525 ಕೋಟಿ ರೂ. ಗಳ ರಾಜಸ್ವ ಸಂಗ್ರಹಣಾ ಗುರಿ .
- **ಸಾರಿಗೆ:** 2024-25ನೇ ಸಾಲಿಗೆ ಸಾರಿಗೆ ಇಲಾಖೆಗೆ ಒಟ್ಟು 13.000 ಕೋಟಿ ರೂ. ರಾಜಸ್ಥ ಸಂಗ್ರಹಣೆ ಗುರಿ.

**ಗಣಿ ಮತ್ತು ಭೂವಿಜ್ಞಾನ**

2024-25ನೇ ಸಾಲಿಗೆ, 9,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿ.

NAMMAKPSC ACADEMY | BREAKING BARRIERS TO GREATNESS | HEBBAL | VIJAYANAGAR Est: 2014

BANGALORE IAS Academy